ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 9/9/2020

## ನಗರಗಳ ಅಭಿವೃದ್ಧಿಗೆ ಆದ್ಯತೆ । ಯಲಹಂಕದಲ್ಲಿ ಇನ್ನೂ 4 ಸೇತುವೆಗಳ ನಿರ್ಮಾಣಕ್ಕೆ ಚಿಂತನೆ

# ವೀರ ಸಾವರ್ಕರ್ ಮಹಾನ್ ದೇಶಭಕ್ತ

9/9/20

ಸಂ.ಕ.ಸಮಾಚಾರ ಯಲಹಂಕ

ಸ್ವಾತಂತ್ರ್ಯ ಸೇನಾನಿ ವೀರ ಸಾವರ್ಕರ್ ತಮ್ಮ ಜೀವನವನ್ನು ದೇಶದ ಸ್ವಾತಂತ್ರ್ಯಕ್ಕಾಗಿ ಮುಡಿಪಾಗಿಟ್ಟ ಮಹಾನ್ ದೇಶಭಕ್ತ. ಅವರು ಎಲ್ಲರಿಗೂ ಸ್ಫೂರ್ತಿದಾಯಕ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬಣ್ಣಿಸಿದರು.

ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆಯಲ್ಲಿ ನವ ನಗರೋತ್ಥಾನ ಯೋಜನೆಯಲ್ಲಿ 34 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿದ್ದ ಸಾವರ್ಕರ್ ಮೇಲು ರಸ್ತೆ ನಾಮಕರಣ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು. ಇಂತಹ ಕಾರ್ಯಕ್ರಮ ಉದ್ಘಾಟನೆ ಮಾಡುವುದು ನನ್ನ ಅದೃಷ್ಟ. ಏಕೆಂದರೆ, ದೇಶಭಕ್ತರೊಬ್ಬರ ಹೆಸರಿನ ಮೇಲ್ಸೇತುವೆ ಉದ್ಘಾಟನೆ ಮಾಡಿ ಅವರ ಹೆಸರು ಚಿರಸ್ಥಾಯಿಯಾಗುವಂತೆ ಮಾಡಲಾಗಿದೆ ಎಂದರು.

ಬೆಂಗಳೂರು ಸಮಗ್ರ ಅಭಿವೃದ್ಧಿಗೆ ಬಿಬಿಎಂಪಿಗೆ 7300 ಕೋಟಿ ಅನುದಾನ ಒದಗಿಸಲಾಗಿದ್ದು, ಯೋಜನೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಬೆಂಗಳೂರು ನಗರದಲ್ಲಿ ಜನಸಂಖ್ಯೆ ಹಾಗೂ ವಾಹನಗಳ ಸಂಖ್ಯೆ ಬೆಳೆದಂತೆ ನಗರವೂ ವಿಸ್ತಾರಗೊಳ್ಳುತ್ತಿದೆ. ನವ ನಗರೋತ್ಥಾನ ವಿಶೇಷ ಮೂಲ ಸೌಕರ್ಯ ಮತ್ತು ಸಾಗರೋತ್ತಾನ ಅಭಿವೃದ್ಧಿ ಯೋಜನೆಯಡಿ ಬೆಂಗಳೂರು ಸೇರಿದಂತೆ ರಾಜ್ಯದ ಎಲ್ಲಾ ನಗರಗಳ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದ್ದು ಬೆಂಗಳೂರು ನಗರವನ್ನು ಸಮಗ್ರವಾಗಿ ಯೋಜಿಸಿರುವ ದೃಷ್ಟಿಯಲ್ಲಿ ಮೂಲಸೌಕರ್ಯ, ತ್ಯಾಜ್ಯ, ಸಂಚಾರ ವ್ಯವಸ್ಥೆ ದೂರದೃಷ್ಟಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದರು.



ಯಲಹಂಕ ಉಪನಗರದಲ್ಲಿ ನಿರ್ಮಿಸಲಾಗಿರುವ ವೀರ್ ಸಾವರ್ಕರ್ ಮೇಲ್ಸೇತುವೆಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಉದ್ಘಾಟಿಸಿದರು.

ಶುಭ್ರ ಬೆಂಗಳೂರು ಯೋಜನೆಯಡಿ 999 ಕೋಟಿ ಅನುದಾನ ಒದಗಿಸಲಾಗಿದೆ. ಕೇಂದ್ರ ಮತ್ತು ರಾಜ್ಯಸರ್ಕಾರ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 30ಕಿ.ಮೀ. ಉದ್ದದ ಪ್ರಮುಖ 36 ರಸ್ತೆಗಳನ್ನು ಸ್ಮಾರ್ಟ್ ರಸ್ತೆಗಳ ಅಡಿಯಲ್ಲಿ 455 ಕೋಟಿ ಅನುದಾನದಲ್ಲಿ ಅಭಿವೃದ್ಧಿಗೊಳಿಸಲಾಗುವುದು. ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಯಡಿಯಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ 400 ಕೋಟಿಗೂ ಹೆಚ್ಚು ಅನುದಾನ ನೀಡಲಾಗಿದೆ ಎಂದು ಹೇಳಿದರು.

ಡಿಸಿಎಂ ಡಾ.ಅಶ್ವತ್ಥ್‌ನಾರಾಯಣ, ಸಚಿವರಾದ ಬಸವರಾಜ ಬೊಮ್ಮಾಯಿ, ಬೈರತಿ ಬಸವರಾಜ್, ಸಿ.ಟಿ ರವಿ. ವಿಧಾನ ಪರಿಷತ್ ಸದಸ್ಯ ದೇವೇಗೌಡ, ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಮತ್ತಿತರರಿದ್ದರು.

> “ಸಾವರ್ಕರ್ ಆತ್ಮಾಹುತಿ ಪುಸ್ತವನ್ನು ಓದಬೇಕು ಅದಕ್ಕಾಗಿ ಉದ್ಘಾಟನೆ ದಿನದಂದೆ 5 ಸಾವಿರ ಜನರಿಗೆ ಹಂಚಲಾಗಿದೆ. ಇಂತಹ ಮಹಾನುಭಾವನ ಹೆಸರಿನ ಸೇತುವೆ ಮೇಲೆ ಹೋದಾಗ ಪ್ರತಿಯೊಬ್ಬನಿಗೂ ದೇಶಭಕ್ತಿ ಮೂಡಿಬರಬೇಕು. ಯಲಹಂಕದಲ್ಲಿ ಇನ್ನೂ ನಾಲ್ಕು ಮೇಲು ಮತ್ತು ಕೆಳಸೇತುವೆ ನಿರ್ಮಿಸಲಾಗುವುದು.
>
> ■ **ಎಸ್.ಆರ್.ವಿಶ್ವನಾಥ್** । ಶಾಸಕ